**1 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ನಂಜನಗೂಡು**

**ಸಿ.ಸಿ.ಸಂಖ್ಯೆ: 129/2020**

ಪಿರ್ಯಾದಿ : ಬಿಳಿಗೆರೆ ಪೊಲೀಸರು

**ವಿರುದ್ಧ**

ಆರೋಪಿತರು : 1. ಫಯಾಜ್ ಅಹಮದ್, ಬಿನ್ ನಸೀರ್ ಅಹಮದ್, 40 ವರ್ಷ
ವಾಸ: ನಗರ್ಲೆ ಗ್ರಾಮ, ನಂಜನಗೂಡು ತಾ.

**ದೋಷಾರೋಪಣೆ**

*ಶ್ರೀ ಕಿಶೋರ್ ಕುಮಾರ್ ಎಂ., 1 ನೇ ಹೆಚ್ಚುವರಿ* ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ಬಿ.ಎ. ಎಲ್‌ಎಲ್.ಬಿ., ನಂಜನಗೂಡು ಆದ ನಾನು ಆರೋಪಿತರಾದ ನಿಮ್ಮ ಮೇಲೆ ದೋಷಾರೋಪಿಸುವುದೇನೆಂದರೆ:-

ನಂಜನಗೂಡು ತಾಲ್ಲೂಕು, ಬಿಳಿಗೆರೆ ಪೊಲೀಸ್ ಠಾಣಾ ಸರಹದ್ದಿಗೆ ಸೇರಿದ ಕಲ್ಮಳ್ಳಿ ಗ್ರಾಮದಲ್ಲಿರುವ ಬಸವರಾಜಪ್ಪರವರಿಗೆ ಸೇರಿದ ಶ್ರೀ ಶಂಭುಲಿಂಗೇಶ್ವರ ಸಾಮಿಲ್ ನಲ್ಲಿ 1 ನೇ ಆರೋಪಿಯು 09 ತೇಗದ ನಾಟಾಗಳನ್ನು ಅಕ್ರಮವಾಗಿ ಸಾಗಣೆ ಮಾಡಿ ದಾಸ್ತಾನು ಮಾಡಿರುತ್ತಾರೆ

ದಿನಾಂಕ 14.12.2018 ರಂದು ಚಾಸಾ-2 ರವರಿಗೆ ಮಾಹಿತಿ ಬಂದ ಮೇರೆಗೆ ದಾಳಿ ಮಾಡಿ ಅಮಾನತ್ತು ಪಡಿಸಿಕೊಂಡು ತಮ್ಮ ಇಲಾಖೆಯ ಎಫ್.ಒ.ಸಿ.ಸಂಖ್ಯೆ 26/2018-19 ರಂತೆ ಕೇಸು ದಾಖಲಿಸಿರುತ್ತಾರೆ. ಸದರಿ ಅಮಾನತ್ತು ಪಡಿಸಿದ ಸಂಜೆ 16.15 ಗಂಟೆ ಸಮಯದಲ್ಲಿ 09 ತೇಗದ ನಾಟಾಗಳನ್ನು ವಲಯ ಕಚೇರಿ ನಂಜನಗೂಡಿಗೆ ಸಾಗಿಸುವಂತೆ ಚಾಸಾ-3 ರವರಿಗೆ ಸೂಚಿಸಿರುತ್ತಾರೆ. ಅದೇ ದಿನ ಸಂಜೆ 16.15 ಗಂಟೆ ಸಮಯದಲ್ಲಿ ಚಾಸಾ-3 ರವರು ಅಮಾನತ್ತು ಪಡಿಸಿಕೊಂಡ 09 ತೇಗದ ನಾಟಾಗಳನ್ನು ಸಾಗಿಸಲು ಹೋದಾಗ, ಆರೋಪಿತರಾದ ನೀವು ಅಪರಾಧವನ್ನು ಎಸಗುವ ಸಮಾನ ಉದ್ದೇಶ ಹೊಂದಿ, 1 ನೇ ಆರೋಪಿಯಾದ ನೀವು ಸಾಗಿಸಲು ಬಿಡದೆ ಗಲಾಟೆ ಮಾಡಿ ತಡೆದು, ಚಾಸಾ-3 ರವರು ನಿರ್ವಹಿಸುತ್ತಿದ್ದ ಸರ್ಕಾರಿ ಕೆಲಸಕ್ಕೆ ಅಪರಾಧಿಕ ಬಲಪ್ರಯೋಗ ಮಾಡಿ ಕರ್ತವ್ಯಕ್ಕೆ ಭಂಗವನ್ನುಂಟು ಮಾಡಿದ ಕಾರಣ, ಭಾರತ ದಂಡ ಸಂಹಿತೆಯ ಕಲಂ 353 ಸಹವಾಚಕ ಕಲಂ 34 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಎರಡನೆಯದಾಗಿ, ಅದೇ ದಿನ, ಸಂಜೆ 16.40 ಗಂಟೆ ಸಮಯದಲ್ಲಿ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಅಪರಾಧವನ್ನು ಎಸಗುವ ಸಮಾನ ಉದ್ದೇಶ ಹೊಂದಿ, ಚಾಸಾ-1 ಮತ್ತು 2 ರವರ ಸ್ಥಳಕ್ಕೆ ಬಂದು 09 ತೇಗದ ನಾಟಾಗಳನ್ನು ಸಾಗಿಸಲು ಪ್ರಯತ್ನಿಸಿದಾಗ, 1 ನೇ ಆರೋಪಿಯಾದ ನೀವು ಇಲ್ಲಿಂದ ನಾಟಾಗಳನ್ನು ಹೇಗೆ ಸಾಗಿಸುತ್ತೀರೋ ನೋಡುತ್ತೇನೆ, ನಿಮಗೆ ನಾಟಾಗಳನ್ನು ಸಾಗಣೆ ಮಾಡಲು ಬಿಡುವುದಿಲ್ಲ, ನನ್ನ ಪ್ರಾಣ ಹೋದರು ಸರಿ ನಿಮಗೆ ಬುದ್ಧಿ ಕಲಿಸುತ್ತೇನೆ ಮತ್ತು ಮರಗಳನ್ನು ಸುಟ್ಟು ಹಾಕುತ್ತೇನೆ ಎಂದು ಕಿರುಚಾಡುತ್ತಾ ತನ್ನ ಬಳಿ

ಇಟ್ಟುಕೊಂಡಿದ್ದ ಪೆಟ್ರೋಲ್ ತುಂಬಿದ್ದ ಪ್ಲಾಸ್ಟಿಕ್ ಕ್ಯಾನಿನ ಮುಚ್ಚಳ ತೆಗೆದು ಪೆಟ್ರೋಲ್ ಅನ್ನು ತನ್ನ ತಲೆಯ ಮೇಲಿಂದ ಮೈ ಮೇಲೆ ಸುರಿದುಕೊಂಡು ಬೆಂಕಿ ಹಚ್ಚಿಕೊಳ್ಳಲು ಪ್ರಯತ್ನಿಸಿ ಆತ್ಮಹತ್ಯೆ ಮಾಡಿಕೊಳ್ಳಲು ಪ್ರಯಪಟ್ಟಿರುತ್ತೀರಿ. ಆದ್ದರಿಂದ **1** ನೇ ಆರೋಪಿಯಾದ ನೀವು, ಭಾರತ ದಂಡ ಸಂಹಿತೆ ಕಲಂ.**309** ಸಹವಾಚಕ ಕಲಂ **34** ರಡಿಯಲ್ಲಿ ದಂಡಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

ಕೊನೆಯದಾಗಿ, ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಅಪರಾಧವನ್ನು ಎಸಗುವ ಸಮಾನ ಉದ್ದೇಶ ಹೊಂದಿ, ಆ ಪೈಕಿ ಕಾನೂನಿನೊಡನೆ ಸಂಘರ್ಷಕ್ಕೊಳಗಾದ ಬಾಲಕ ರವರು ಸ್ಥಳದಲ್ಲಿ ಹಾಜರಿದ್ದು ತಮ್ಮ ತಂದೆ **1** ನೇ ಆರೋಪಿಗೆ ಏನಾದರೂ ಹೆಚ್ಚು ಕಡಿಮೆ ಆದರೆ ನಿಮ್ಮನ್ನು ಉಳಿಸುವುದಿಲ್ಲ ಎಂದು ಕೊಲೆ ಬೆದರಿಕೆ ಹಾಕಿ ಅಪರಾಧಿಕ ಭಯೋತ್ಪಾದನೆಯನ್ನು ಉಂಟು ಮಾಡಿದ ಕಾರಣ, ಭಾರತ ದಂಡ ಸಂಹಿತೆ ಕಲಂ **506** ಸಹವಾಚಕ ಕಲಂ **34** ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಈ ಮೇಲ್ಕಂಡ ಆರೋಪಗಳ ಬಗ್ಗೆ ವಿಚಾರಣೆಗೆ ಈ ಕೆಳಕಂಡಂತೆ ಆದೇಶಿಸುತ್ತೇನೆ.

ಪ್ರಶ್ನೆ **1:** ಮೇಲ್ಕಂಡ ಎಲ್ಲಾ ಆಪಾದನೆಗಳನ್ನು ಓದಿ ಹೇಳಿದ್ದು ಅರ್ಥವಾಯಿತೇ?

ಉತ್ತರ :

ಪ್ರಶ್ನೆ **2:** ಸದರಿ ಆಪಾದನೆಗಳನ್ನು ಒಪ್ಪಿಕೊಳ್ಳುವೆಯೋ? ಅಥವಾ ವಿಚಾರಣೆಯಾಗಬೇಕೋ?

ಉತ್ತರ :

(ಮೇಲ್ಕಂಡ ಆರೋಪವನ್ನು ಆರೋಪಿಗೆ ಓದಿ ಹೇಳಿ ಕೇಳಲಾಯಿತು. ಆರೋಪಿ ಕೊಟ್ಟ ಉತ್ತರವನ್ನು ಅವರು ಉತ್ತರಿಸಿದಂತೆಯೇ ಬರೆದುಕೊಂಡಿದ್ದು ಸಂಪೂರ್ಣ ಹಾಗೂ ಸರಿಯಾದ ಮಾಹಿತಿಯನ್ನು ಒಳಗೊಂಡಿದೆ ಎಂದು ದಿನಾಂಕ 03.08.2023 ರಂದು ತೆರೆದ ನ್ಯಾಯಾಲಯದಲ್ಲಿ ದೃಢೀಕರಿಸಿರುತ್ತೇನೆ.)

ಸಹಿ/-
**1** ನೇ ಹೆ ಸಿ.ಜೆ. ಮತ್ತು ಜೆ.ಎಂ.ಎಫ್.ಸಿ.
**ನಂಜನಗೂಡು**

1 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ನಂಜನಗೂಡು

**<u>ಸಿ.ಸಿ.ಸಂಖ್ಯೆ: 129/2020</u>**

ಪಿರ್ಯಾದಿ : ಬಿಳಿಗೆರೆ ಪೊಲೀಸರು

ವಿರುದ್ಧ

ಆರೋಪಿತರು : 1. ಮಹದೇವಸ್ವಾಮಿ @ ನೀರಿನ ಮಾದೇಶ, ಬಿನ್ ಮೆಸ್ಸೆ ಮಹದೇವಯ್ಯ, 32 ವರ್ಷ

2. ಶಿವಣ್ಣ, ಬಿನ್ ಲೇ. ಮರಯ್ಯ, 39 ವರ್ಷ
ಇಬ್ಬರ ವಾಸಃ ನಗರ್ಲೆ ಗ್ರಾಮ, ನಂಜನಗೂಡು ತಾ.

: ಆಪಾದನೆ :

ಪ್ರಶ್ನೆ1 : ಮೇಲ್ಕಂಡ ಎಲ್ಲಾ ಆಪಾದನೆಗಳನ್ನು ಓದಿ ಹೇಳಿದ್ದು ಅರ್ಥವಾಯಿತೇ ?
ಉತ್ತರ :

ಪ್ರಶ್ನೆ2 : ಸದರೀ ಆಪಾದನೆಗಳನ್ನು ಒಪ್ಪಿಕೊಳ್ಳುವೆಯಾ ಅಥವಾ ವಿಚಾರಣೆಯಾಗಬೇಕೋ?
ಉತ್ತರ :

ಮೇಲ್ಕಂಡ ಎಲ್ಲಾ ಆಪಾದನೆಗಳನ್ನು ನನ್ನ ಸಮಕ್ಷಮ ಓದಿ ಹೇಳಿ ಆರೋಪಿತನ ಹೇಳಿಕೆಯನ್ನು ಪಡೆದುಕೊಂಡು ಸತ್ಯವಾಗಿದೆ ಎಂದು ದೃಢೀಕರಿಸಲಾಗಿದೆ.

ದಿನಾಂಕಃ

1 ನೇ ಹೆ ಸಿ.ಜೆ. ಮತ್ತು ಜೆ.ಎಂ.ಎಫ್.ಸಿ.
ನಂಜನಗೂಡು

1 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ನಂಜನಗೂಡು

**<u>ಸಿ.ಸಿ.ಸಂಖ್ಯೆ: 129/2020</u>**

ಪಿರ್ಯಾದಿ : ಬಿಳಿಗೆರೆ ಪೊಲೀಸರು

ವಿರುದ್ಧ

ಆರೋಪಿತರು : 1. ಮಹದೇವಸ್ವಾಮಿ @ ನೀರಿನ ಮಾದೇಶ, ಬಿನ್ ಮೆಸ್ಸೆ ಮಹದೇವಯ್ಯ, 32 ವರ್ಷ

2. ಶಿವಣ್ಣ, ಬಿನ್ ಲೇ. ಮರಯ್ಯ, 39 ವರ್ಷ
ಇಬ್ಬರ ವಾಸಃ ನಗರ್ಲೆ ಗ್ರಾಮ, ನಂಜನಗೂಡು ತಾ.

: ಆಪಾದನೆ :

ಪ್ರಶ್ನೆ1 : ಮೇಲ್ಕಂಡ ಎಲ್ಲಾ ಆಪಾದನೆಗಳನ್ನು ಓದಿ ಹೇಳಿದ್ದು ಅರ್ಥವಾಯಿತೇ ?
ಉತ್ತರ :

ಪ್ರಶ್ನೆ2 : ಸದರೀ ಆಪಾದನೆಗಳನ್ನು ಒಪ್ಪಿಕೊಳ್ಳುವೆಯಾ ಅಥವಾ ವಿಚಾರಣೆಯಾಗಬೇಕೋ?
ಉತ್ತರ :

ಮೇಲ್ಕಂಡ ಎಲ್ಲಾ ಆಪಾದನೆಗಳನ್ನು ನನ್ನ ಸಮಕ್ಷಮ ಓದಿ ಹೇಳಿ ಆರೋಪಿತನ ಹೇಳಿಕೆಯನ್ನು ಪಡೆದುಕೊಂಡು ಸತ್ಯವಾಗಿದೆ ಎಂದು ದೃಢೀಕರಿಸಲಾಗಿದೆ.

ದಿನಾಂಕಃ

1 ನೇ ಹೆ ಸಿ.ಜೆ. ಮತ್ತು ಜೆ.ಎಂ.ಎಫ್.ಸಿ.
ನಂಜನಗೂಡು